# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 233 | Pages. 2 | Date: 25-08-2026, TUESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 233 - ಪುಟಗಳು : 2 | 25-08-2026 | ಮಂಗಳವಾರ | Ph: 8762954248 | ದರ : ₹1


# ಸಂಸತ್‌ನಲ್ಲಿ ಜಿಲ್ಲೆಯ ಅಭಿವೃದ್ಧಿಯ ಜಪ

## ಸಂಸದ ಶ್ರೇಯಸ್ ಪಟೇಲ್ ಹೇಳಿಕೆ | ಕಾಡಾನೆ ಸಮಸ್ಯೆಗೆ ಪರಿಹಾರದ ಭರವಸೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಂಸತ್ ಮುಂಗಾರು ಅಧಿವೇಶನದಲ್ಲಿ ಜಿಲ್ಲೆಯ ಹಲವು ಸಮಸ್ಯೆ, ಅಭಿವೃದ್ಧಿ ಯೋಜನೆಗಳ ಬಗ್ಗೆ ಪ್ರಸ್ತಾಪಿಸಿದ್ದೇನೆ ಎಂದು ಸಂಸದ ಶ್ರೇಯಸ್ ಪಟೇಲ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಅಧಿವೇಶನದಲ್ಲಿ ಹತ್ತು ಹಲವು ಪ್ರಶ್ನೆ ಕೇಳಿರುವುದಲ್ಲದೆ ರಸ್ತೆ, ರೈಲ್ವೆ, ಶಿಕ್ಷಣ, ಆರೋಗ್ಯ, ಪರಿಸರ, ಪ್ರವಾಸೋದ್ಯಮ ಹಾಗೂ ಮೂಲಸೌಕರ್ಯ ಸೇರಿ ಹಲವು ಬೇಡಿಕೆ ಕುರಿತು ಸಂಬಂಧಪಟ್ಟ ಸಚಿವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದೇನೆ ಎಂದರು.

ಒಟ್ಟಾರೆ 3 ತಾರಾಂಕಿತ ಹಾಗೂ 7ಅತಾರಾಂಕಿತ ಸೇರಿ 10 ಪ್ರಮುಖ ಸಂಸತ್ತಿನ ಪ್ರಶ್ನೆಗಳ ಮೂಲಕ' ಜಿಲ್ಲೆಯ ವಿಷಯಗಳನ್ನು ಕೇಂದ್ರದ ಅಧಿಕೃತ ದಾಖಲಾತಿಗೆ ತರಲಾಗಿದೆ. ಕಾಫಿ ತೋಟಗಳನ್ನು ಸರ್ಫೇಸಿ ಕಾಯ್ದೆಯಿಂದ ಹೊರಗಿಡಬೇಕು ಎಂಬ ನನ್ನ ಪ್ರಶ್ನೆಗೆ ಸಂಬಂಧಿಸಿದ ವಿಚಾರ ನ್ಯಾಯಾಲಯದಲ್ಲಿ ಇದೆ ಎಂದು ಸರ್ಕಾರ ತಿಳಿಸಿದೆ ಎಂದರು.

ಮಕ್ಕಳ ಪೌಷ್ಟಿಕತೆ ಕಾಪಾಡಲು ಜಿಲ್ಲೆಗೆ ನಾಲ್ಕು (ಚನ್ನರಾಯಪಟ್ಟಣ, ಹೊಳೆನರಸೀಪುರ, ಆಲೂರು ಮತ್ತು ಅರಕಲಗೂಡು) ಹೊಸ ಎನ್‌ಆರ್‌ಸಿ ಕೇಂದ್ರಗಳನ್ನು ತೆರೆಯಲು ಅನುಮೋದನೆ ಸಿಕ್ಕಿದೆ.

ಹಾಗೆಯೇ ತೆಂಗು ಬೆಳೆಗಾರರನ್ನು ಫಸಲ್ ಭಿಮಾ ವ್ಯಾಪ್ತಿಗೆ ಸೇರಿಸಬೇಕು ಎಂದು ಕೋರಲಾಗಿದೆ. ಶುಂಠಿ ಬೆಳೆಗಾರರಿಗೂ ವಿಮೆ ನೀಡಬೇಕು. ರಾಜಮುಡಿ ಅಕ್ಕಿಗೆ ಜಿಐ ಟ್ಯಾಗ್ ಪಡೆಯುವ ಕುರಿತು ಪ್ರಶ್ನೆ ಮಾಡಿದ್ದೇನೆ.



ಜಿಐ ಅರ್ಜಿ ಇನ್ನೂ ನೋಂದಣಿ ಆಗಿಲ್ಲ ಎಂಬ ಉತ್ತರ ಬಂದಿದೆ ಎಂದರು.

ಅರಕಲಗೂಡು ತಾಲೂಕಿಗೂ ರೈಲು ಸಂಪರ್ಕ, ಹಾಸನಕ್ಕೆ ಸಿಂಥೆಟಿಕ್ ಹಾಕಿ ಟರ್ಫ್ ಮಾಡಿಕೊಡಬೇಕು ಎಂದು ಕೇಂದ್ರ ಸರ್ಕಾರದ ಗಮನ ಸೆಳೆಯಲಾಗಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ 701 ಅಂಗನವಾಡಿ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಅನುಮೋದನೆ ದೊರೆತಿದೆ. ಮಾದಕ ವಸ್ತುಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಗಮನ ಸೆಳೆದು, ಕಠಿಣ ಕಾನೂನು ಜಾರಿ ಜೊತೆಗೆ ಶಾಲೆ-ಕಾಲೇಜು ಮಟ್ಟದಲ್ಲಿ ಜಾಗೃತಿ ಮೂಡಿಸಲು ವಿನಂತಿಸಲಾಗಿದೆ ಎಂದರು.

ಪ್ರಮುಖವಾಗಿ ಹಾಸನಾಂಬೆ ದೇವಾಲಯದ ಸಮಗ್ರ ಅಭಿವೃದ್ಧಿ, ಭಕ್ತರಿಗೆ ಮೂಲಭೂತ ಸೌಕರ್ಯ, ಪ್ರವಾಸೋದ್ಯಮ ಸೌಲಭ್ಯ ಕಲ್ಪಿಸಲು ಪ್ರಸಾದ್ ಯೋಜನೆಯಡಿ ನೆರವು ಕೇಳಲಾಗಿದೆ. ಜಿಲ್ಲೆಯ ಸಮಗ್ರ ಅಭಿವೃದ್ಧಿ ನೇರ ಮನವಿ ಸಲ್ಲಿಸಿದ್ದೇನೆ ಎಂದರು.

ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಸಂಬಂಧ ಕೇಂದ್ರ ಭೂ ಸಾರಿಗೆ ಸಚಿವರನ್ನು ಭೇಟಿ ಮಾಡಿದ್ದು, ಅವರಿಂದ ಸಕಾರಾತ್ಮಕ ಸ್ಪಂದನೆ ಸಿಕ್ಕಿದೆ. ಹಾಸನ ನಗರ ವ್ಯಾಪ್ತಿಯಲ್ಲಿ ಹೆದ್ದಾರಿ ಅಭಿವೃದ್ಧಿಗೆ 118 ಕೋಟಿಗೆ ಅನುಮೋದನೆ ದೊರೆತಿದೆ ಎಂದರು.

ಹಾಗೆಯೇ ಬಾಣಾವರ-ಹುಳಿಯಾರ್ ರಸ್ತೆ ಅಗಲೀಕರಣಕ್ಕೆ ಅನುದಾನ, ಮೊಸಳೆಹೊಸಳ್ಳಿಯಲ್ಲಿ ಫ್ಲೈಓರ್ ನಿರ್ಮಿಸಲು ಪತ್ರದ ಜೊತೆಗೆ ಮುಖಾಮುಖಿ ಭೇಟಿ ಮಾಡಿದ್ದೇನೆ. ಇದೇ ವಿಚಾರವಾಗಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಪತ್ರ ಬರೆದಿದ್ದಾರೆ ಎಂದರು.

ಹಾಸನ-ಬೇಲೂರು ರಸ್ತೆ ಮತ್ತು ರೈಲು ಕಾಮಗಾರಿ ಬೇಗ ಶುರುವಾಗಿ ಮುಗಿಯಬೇಕು ಎಂದು ಮನವಿ ಸಲ್ಲಿಸಲಾಗಿದೆ.ಬೆಂಗಳೂರು-ಹಾಸನ ನಡುವೆ ಬೆಳಗ್ಗೆ ಇಂಟರ್ ಸಿಟಿ ರೈಲು ಓಡಿಸಲು ಕೋರಲಾಗಿದೆ. ಹಾಸನ-ಅರಸೀಕೆರೆ-ಮೈಸೂರು ನಡುವೆ ಡೆಮಿ ರೈಲು ಓಡಾಟಕ್ಕೆ ಕೋರಲಾಗಿದೆ.

ಹಾಸನಕ್ಕೆ ಐಐಟಿ ತರಲು ಪ್ರಯತ್ನ ಮುಂದುವರಿದಿದೆ ಎಂದ ಅವರು ಹಾಸನಕ್ಕೆ 200 ಹಾಸಿಗೆಗಳ ಇಎಸ್‌ಐ ಆಸ್ಪತ್ರೆಗಾಗಿ ಮನವಿ ಸಲ್ಲಿಸಿದ್ದೇನೆ. ಜಿಲ್ಲೆಯ ಐತಿಹಾಸಿಕ ಮತ್ತು ಪ್ರವಾಸೋದ್ಯಮ ಅಭಿವೃದ್ಧಿ ಸಂಬಂಧವಾಗಿಯೇ ಮನವಿ ಮಾಡಿದ್ದೇನೆ ಎಂದರು.

### ಕಾಡಾನೆ ಹಾವಳಿ: ಜಂಟಿ ಯೋಜನೆಗೆ ಮನವಿ

ಸಕಲೇಶಪುರ, ಬೇಲೂರು ಹಾಗೂ ಕಾಫಿ ತೋಟಗಳಲ್ಲಿ ತೀವ್ರಗೊಂಡಿರುವ ಆನೆ-ಮಾನವ ಸಂಘರ್ಷದ ಸಮಸ್ಯೆಯನ್ನು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆಗೆ ಕೇಂದ್ರ ಸಚಿವ ಭೂಪೇಂದರ್ ಯಾದವ್ ಅವರ ಗಮನಕ್ಕೆ ತರಲಾಗಿದ್ದು, ತುರ್ತು ಮಧ್ಯೆ ಪ್ರವೇಶಕ್ಕೆ ಮನವಿ ಮಾಡಿದ್ದೇನೆ. ರಾಜ್ಯ-ಕೇಂದ್ರ ಜಂಟಿ ಕಾರ್ಯಯೋಜನೆ ಮೂಲಕ ಸಮಸ್ಯೆಯ ವೈಜ್ಞಾನಿಕ ಅಧ್ಯಯನ ಮತ್ತು ಸಮಸ್ಯೆ ನಿವಾರಣೆಗೆ ಕೋರಿದ್ದೇನೆ ಎಂದು ಸಂಸದರು ಹೇಳಿದರು.

# ರಾಜ್ಯಮಟ್ಟದ ನೃತ್ಯ ಸ್ಪರ್ಧೆಯಲ್ಲಿ ಸ್ಕಾಲರ್ಸ್ ಶಾಲೆಯ ವಿದ್ಯಾರ್ಥಿನಿಯರಿಗೆ ಪ್ರಥಮ ಸ್ಥಾನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು : ಕರ್ನಾಟಕ ಐಸಿಎಸ್‌ಇ ಶಾಲೆಗಳ ಅಸೋಸಿಯೇಷನ್ ವತಿಯಿಂದ ನಗರದಲ್ಲಿ ಆಯೋಜಿಸಲಾಗಿದ್ದ ರಾಜ್ಯಮಟ್ಟದ ನೃತ್ಯ ಸ್ಪರ್ಧೆಯಲ್ಲಿ ಸ್ಕಾಲರ್ಸ್ ಇಂಟರ್‌ನ್ಯಾಷನಲ್ ಶಾಲೆಯ ವಿದ್ಯಾರ್ಥಿನಿಯರು ಪ್ರಥಮ ಸ್ಥಾನ ಗಳಿಸಿದ್ದಾರೆ.

ಆಗಸ್ಟ್ 22ರಂದು ನಗರದ ಕ್ರೈಸ್ಟ್ ಅಕಾಡೆಮಿ ಶಾಲೆಯಲ್ಲಿ ಜರುಗಿದ ಈ ಸ್ಪರ್ಧೆಯಲ್ಲಿ ರಾಜ್ಯದ ವಿವಿಧ ಭಾಗಗಳ ಒಟ್ಟು 105 ಶಾಲೆಗಳು ಪಾಲ್ಗೊಂಡಿದ್ದವು. ತೀವ್ರ ಪೈಪೋಟಿಯಿಂದ ಕೂಡಿದ್ದ ಸ್ಪರ್ಧೆಯಲ್ಲಿ ಸ್ಕಾಲರ್ಸ್ ಇಂಟರ್‌ನ್ಯಾಷನಲ್ ಶಾಲೆಯ 9 ಮತ್ತು 10ನೇ ತರಗತಿಯ ಬಾಲಕಿಯರ (ಜೂನಿಯರ್) ತಂಡವು 100ಕ್ಕೆ 98 ಅಂಕಗಳನ್ನು ಪಡೆಯುವ ಮೂಲಕ ಪ್ರಥಮ ಬಹುಮಾನಕ್ಕೆ ಭಾಜನವಾಗಿದೆ.

ವಿದ್ಯಾರ್ಥಿನಿಯರ ಸಂಘಟಿತ ಕಲಾ ಪ್ರದರ್ಶನ ತೀರ್ಪುಗಾರರ ಮೆಚ್ಚುಗೆಗೆ ಪಾತ್ರವಾಯಿತು. ಈ ಸಾಧನೆ ಕುರಿತು ಪ್ರತಿಕ್ರಿಯಿಸಿರುವ ಶಾಲೆಯ ಆಡಳಿತಾಧಿಕಾರಿ ಡಾ. ಎಚ್.ಎನ್. ಚಂದ್ರಶೇಖರ್, ವಿದ್ಯಾರ್ಥಿನಿಯರ ನಿರಂತರ ಪರಿಶ್ರಮಕ್ಕೆ ತಕ್ಕ ಪ್ರತಿಫಲ ದೊರೆತಿದೆ. ಈ ಯಶಸ್ಸಿನ ಪಯಣ ಭವಿಷ್ಯದಲ್ಲೂ ಮುಂದುವರಿಯಲಿ ಎಂದು ಶುಭಕೋರಿದ್ದಾರೆ. ಶಾಲೆಯ ಕಲಾ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ವಿಭಾಗದ ಈ ಮೈಲಿಗಲ್ಲನ್ನು ಕಾರ್ಯದರ್ಶಿ ಮಮತಾ ಚಂದ್ರಶೇಖರ್ ಶ್ಲಾಘಿಸಿದ್ದು, ಮಾರ್ಗದರ್ಶನ ನೀಡಿದ ಶಿಕ್ಷಕ ವೃಂದ ಹಾಗೂ ಪೋಷಕರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

# ಗ್ರಾ.ಪಂ. ಮೀಸಲಾತಿ ಸರಿಪಡಿಸಲು 15 ದಿನಗಳ ಗಡುವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ಗ್ರಾಮ ಪಂಚಾಯಿತಿ ಚುನಾವಣೆಗಾಗಿ ಸರ್ಕಾರದ ಮಾರ್ಗಸೂಚಿ ಮತ್ತು ಅಧಿಸೂಚನೆಯಂತೆ ಮೀಸಲಾತಿ ನಿಗದಿಪಡಿಸದೆ ಅವೈಜ್ಞಾನಿಕವಾಗಿ ಮೀಸಲಾತಿ ಪ್ರಕಟಿಸಲಾಗಿದೆ ಎಂದು ಆರೋಪಿಸಿ ಜೆಡಿಎಸ್ ಕಾರ್ಯಕರ್ತರು ಸೋಮವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ನಗರದ ಹೇಮಾವತಿ ಪ್ರತಿಮೆ ಬಳಿಯಿಂದ ಹೊರಟ ನೂರಾರು ಮಂದಿ ಪ್ರತಿಭಟನಾಕಾರರು, ಎನ್. ಆರ್. ವೃತ್ತದಲ್ಲಿ ಕೆಲ ಸಮಯ ಮಾನವ ಸರಪಳಿ ನಿರ್ಮಿಸಿ ಘೋಷಣೆ ಕೂಗಿದರು. ನಂತರ ಡಿಸಿ ಕಚೇರಿಗೆ ಆಗಮಿಸಿದಾಗ ಬ್ಯಾರಿಕೇಡ್ ಮೂಲಕ ಪೊಲೀಸರು ಅವರನ್ನು ತಡೆದರು.

ಈ ವೇಳೆ ಮನವಿ ಸ್ವೀಕರಿಸಲು ಹೆಚ್ಚುವರಿ ಜಿಲ್ಲಾಧಿಕಾರಿ ಆಗಮಿಸುತ್ತಾರೆ ಎಂದಾಗ ಇದಕ್ಕೆ ಒಪ್ಪದ ಪ್ರತಿಭಟನಾಕಾರರು,




ಜಿಲ್ಲಾಧಿಕಾರಿ ಅವರೇ ಖುದ್ದಾಗಿ ಸ್ಥಳಕ್ಕೆ ಆಗಮಿಸಿ ಮನವಿ ಸ್ವೀಕರಿಸಬೇಕು ಎಂದು ಪಟ್ಟು ಹಿಡಿದರು. ಅಲ್ಲದೇ ಕಚೇರಿಯಲ್ಲೇ ಇರುವ ಡಿಸಿ ಅವರು ಬಂದು ಮನವಿ ಸ್ವೀಕರಿಸಬೇಕು ಎಂದು ಆಗ್ರಹಿಸಿದರು. ಈ ವೇಳೆ ಜಿಲ್ಲಾಧಿಕಾರಿ ವಿರುದ್ಧ ಘೋಷಣೆಗಳನ್ನು ಕೂಗಿದ ಪ್ರತಿಭಟನಾಕಾರರು, ಗ್ರಾಮ ಪಂಚಾಯಿತಿ ಸ್ಥಾನಗಳಿಗೆ ಮೀಸಲಾತಿ ನಿಗದಿಪಡಿಸುವ ಪ್ರಕ್ರಿಯೆಯಲ್ಲಿ ನಿಯಮಗಳನ್ನು ಸರಿಯಾಗಿ ಪಾಲಿಸಿಲ್ಲ ಎಂದು ಆರೋಪಿಸಿದರು. ಕಡೆಗೆ ಡಿಸಿ ಅವರೇ ಆಗಮಿಸಿ ಮನವಿ ಸ್ವೀಕರಿಸಿದರು.

ಹಾಲಿ ಪ್ರಕಟವಾಗಿರುವ ಮೀಸಲಾತಿಯಿಂದ ಹಲವೆಡೆ ಗೊಂದಲ ಉಂಟಾಗಿದ್ದು, ಸ್ಥಳೀಯ ಜನಪ್ರತಿನಿಧಿಗಳು ಮತ್ತು ಗ್ರಾಪಂ ಸದಸ್ಯರ ಆಕ್ಷೇಪಣೆಗಳಿಗೆ ಸೂಕ್ತ ಸ್ಪಂದನೆ ದೊರೆತಿಲ್ಲ ಎಂದು ದೂರಿದ ಪ್ರತಿಭಟನಾಕಾರರು, ಸರ್ಕಾರದ ಅಧಿಸೂಚನೆ ಮತ್ತು ನಿಗದಿತ ಮಾರ್ಗಸೂಚಿಗಳಿಗೆ ಅನುಗುಣವಾಗಿ ಮೀಸಲಾತಿ ನಿಗದಿ ಮಾಡಬೇಕೆಂದು ಅವರು ಒತ್ತಾಯಿಸಿದರು. ಸರ್ಕಾರ ಹಾಗೂ ಜಿಲ್ಲಾಡಳಿತ ಕೂಡಲೇ ಮಧ್ಯಪ್ರವೇಶಿಸಿ ಈಗಾಗಲೇ ನಿಗದಿಪಡಿಸಿರುವ ಈಗಿನ ಮೀಸಲಾತಿ ರದ್ದುಪಡಿಸಬೇಕು ಎಂದು ಅವರು ಆಗ್ರಹಿಸಿದರು. ಇಲ್ಲವಾದರೆ ಕಾನೂನು ಹೋರಾಟ ಸೇರಿದಂತೆ ಎಲ್ಲ ರೀತಿಯ ಹೋರಾಟ ಮಾಡುವುದಾಗಿ ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಮಾಜಿ ಸಚಿವ ಹೆಚ್.ಕೆ.ಕುಮಾರಸ್ವಾಮಿ, ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್. ಲಿಂಗೇಶ್, ತಾಲೂಕು ಅಧ್ಯಕ್ಷ ಎಸ್.ದ್ಯಾವೇಗೌಡ, ಸಕಲೇಶಪುರ ಅಧ್ಯಕ್ಷ ಸೋಮಣ್ಣ, ಒಕ್ಕಲಿಗರ ಸಂಘದ ನಿರ್ದೇಶಕ ಸುಮುಖ ರಘುಗೌಡ, ಆಲೂರು ತಾಲೂಕು ಅಧ್ಯಕ್ಷ ಮಂಜೇಗೌಡ, ನಗರಸಭೆ ಮಾಜಿ ಅಧ್ಯಕ್ಷ ಸಿ.ಆರ್. ಶಂಕರ್, ಹೆಚ್ ಡಿಸಿಸಿ ಬ್ಯಾಂಕ್ ಅಧ್ಯಕ್ಷ ಸೋಮನಹಳ್ಳಿ ನಾಗರಾಜ್, ಮುಖಂಡರಾದ ವಾಸುದೇವ್, ಹೊನ್ನವಳ್ಳಿ ಸತೀಶ್, ಗಿರೀಶ್, ಕಮಲ್ ಕುಮಾರ್, ಜಿಲ್ಲಾ ವಕ್ತಾರ ಹೊಂಗೆರೆ ರಘು, ತಾಲೂಕು ಪಂಚಾಯತಿ ಮಾಜಿ ಸದಸ್ಯ ಜಗದೀಶ್ ರಾಮಘಟ್ಟ ಇತರರಿದ್ದರು.

# ಗ್ರಾ.ಪಂ. ಮೀಸಲಾತಿ ಪರಮಾಧಿಕಾರ: ಜಿಲ್ಲಾಧಿಕಾರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಗ್ರಾಮ ಪಂಚಾಯಿತಿ ಮೀಸಲಾತಿ ಪ್ರಕಟಣೆ ವಿಚಾರದಲ್ಲಿ ಯಾವುದೇ ನಿಯಮ ಉಲ್ಲಂಘನೆಯಾಗಿಲ್ಲ. ಮಾಜಿ ಸಚಿವ ರೇವಣ್ಣ ಅವರು ಮಹಿಳಾ ಅಧಿಕಾರಿಗಳ ಮನೋಬಲ ಕುಗ್ಗಿಸುವ ಕೆಲಸ ಮಾಡಬಾರದು ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ತಹಶೀಲ್ದಾರ್ ಆಗಲಿ, ಶಾಸಕರಾಗಲಿ ಮೀಸಲಾತಿ ನಿಗದಿ ಮಾಡುವುದಿಲ್ಲ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1998ರ ನಿಯಮ 3ರ ಅನ್ವಯ ಜಿಲ್ಲಾಧಿಕಾರಿಯೇ ಮೀಸಲಾತಿ ನಿಗದಿಪಡಿಸಬೇಕು. ತಹಶೀಲ್ದಾರ್ ಕೊಟ್ಟಿರುವ ಪಟ್ಟಿಯನ್ನೇ ಅಂತಿಮಗೊಳಿಸುವಂತಿಲ್ಲ. ಅವರು ತಮಗೆ ಬೇಕಾದ ಹಾಗೆ ಅಥವಾ ಯಾರದೋ ಒತ್ತಡಕ್ಕೆ ಮಣಿದು ತಯಾರಿಸಿರುವ ಪಟ್ಟಿಯನ್ನು ಕಣ್ಮುಚ್ಚಿ ಒಪ್ಪಿಕೊಳ್ಳುವುದು ಜಿಲ್ಲಾಧಿಕಾರಿ ಕೆಲಸ ಅಲ್ಲ. ಪಟ್ಟಿ ಅಂತಿಮಗೊಳಿಸುವುದು ಜಿಲ್ಲಾಧಿಕಾರಿಯ ಪರಮಾಧಿಕಾರ ಎಂದರು.

ಆದರೂ ಏನಾದರೂ ಲೋಪಗಳಿದ್ದರೆ



ಆಕ್ಷೇಪಣೆ ಸಲ್ಲಿಸಬಹುದು. ಅಥವಾ ನ್ಯಾಯಾಲಯದ ಮೆಟ್ಟಿಲೇರಬಹುದು. ಮೀಸಲಾತಿ ಪಟ್ಟಿ ಬಗ್ಗೆ ಆಕ್ಷೇಪಿಸಲು ಕಾನೂನಿನಲ್ಲಿ ಅವಕಾಶ ಇಲ್ಲವಾದರೂ ಸರ್ಕಾರದ ಹಂತದಲ್ಲಿ ಚರ್ಚಿಸಲು ಅವಕಾಶಗಳಿವೆ. ಈಗ ಪ್ರಕಟಿಸಿರುವ ಪಟ್ಟಿಯೇ ಬಹುತೇಕ ಅಂತಿಮವಾಗುತ್ತದೆ ಎಂದರು.

ಕಾನೂನಿನಲ್ಲಿ ಗ್ರಾ.ಪಂ. ಕ್ಷೇತ್ರ ಮೀಸಲಾತಿ ಪುನರಾವರ್ತನೆ ಆಗಬಾರದೆಂಬ ನಿಯಮವಿದೆ. ನಾವು ಗೊತ್ತುಪಡಿಸಿದ ಮೀಸಲಾತಿ ಅನ್ವಯ ಆ ಪಂಚಾಯಿತಿಯಲ್ಲಿ ನಿಗದಿತ ಅಭ್ಯರ್ಥಿ ಇಲ್ಲದಿದ್ದರೆ ಬೇರೆಯವರು ಸ್ಪರ್ಧಿಸಬಹುದು. ಆದಾಗ್ಯೂ ಪಟ್ಟಿಯಲ್ಲಿ ಸಮಸ್ಯೆಗಳಿರುವ ಕುರಿತು ಗಮನಕ್ಕೆ ತಂದರೆ ಪರಿಗಣಿಸಲಾಗುವುದು ಎಂದು ತಿಳಿಸಿದರು.

ಅಸಂಬದ್ಧ ಪದ ಬಳಸಿ ಅಧಿಕಾರಿಗಳ ಮನೋಬಲ ಕುಗ್ಗಿಸುವ ಪ್ರಯತ್ನ ಸರಿಯಲ್ಲ, ನಾನು ಯಾವ ಕಾರಣಕ್ಕೂ ಅವರ ನಿಂದನಾತ್ಮಕ ಮಾತುಗಳಿಂದ ದುರ್ಬಲಳಾಗುವುದಿಲ್ಲ. ಪ್ರತಿ ಮೂರ್ನಾಲ್ಕು ತಿಂಗಳಿಗೊಮ್ಮೆ ಸುದ್ದಿಗೋಷ್ಠಿ ನಡೆಸಿ ಅಧಿಕಾರಿಗಳ ಕುರಿತು ತುಂಬಾ ತುಚ್ಛವಾಗಿ ಮಾತನಾಡುವುದುನ್ನು ಕೇಳಿದ್ದೇನೆ. ಈ ಹಿಂದೆಯೂ ಹೀಗೆ ಮಾಡಿದ್ದಾರೆಂದು ತಿಳಿದಿದೆ. ಅವರು ಮಾಜಿ ಸಚಿವರು, ಅನುಭವಿಗಳಿದ್ದಾರೆ. ಅಧಿಕಾರಿಗಳು ತಪ್ಪು ಮಾಡಿದ್ದರೆ ಸರಿದಾರಿಗೆ ತರುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ನಮ್ಮಿಂದ ತಪ್ಪುಗಳಾಗಿಲ್ಲ ಎಂದು ಹೇಳುವುದಿಲ್ಲ. ಆದರೆ ಲೋಪ ಸರಿಪಡಿಸಿಕೊಳ್ಳಲು ಅವಕಾಶ ನೀಡಬೇಕು. ವೈಯಕ್ತಿಕ ತೇಜೋವಧೆ ಮಾಡುವುದು ಅವರ ಘನತೆಗೆ ಶೋಭೆಯಲ್ಲವೆಂದು ಅಸಮಾಧಾನ ವ್ಯಕ್ತಪಡಿಸಿದರು.

# ದ್ವಿಭಾಷಾ ಶಿಕ್ಷಣ ನೀತಿ ಮರುಪರಿಶೀಲನೆಗೆ ಆಗ್ರಹ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸರ್ಕಾರಿ ಶಾಲೆಗಳಲ್ಲಿ ಜಾರಿಗೊಳಿಸಿರುವ ದ್ವಿಭಾಷಾ ಶಿಕ್ಷಣ ನೀತಿಯಲ್ಲಿ ಕನ್ನಡಕ್ಕೆ ಪ್ರಾಧಾನ್ಯತೆ ನೀಡಬೇಕು ರಂದು ಆಗ್ರಹಿಸಿ ಅಖಿಲ ಭಾರತೀಯ ಸಾಹಿತ್ಯ ಪರಿಷದ್ ವತಿಯಿಂದ ಸೋಮವಾರ ಜಿಲ್ಲಾಡಳಿತದ ಮೂಲಕ ರಾಷ್ಟ್ರಪತಿಗೆ ಮನವಿ ಸಲ್ಲಿಸಲಾಯಿತು.

ರಾಜ್ಯ ಸರ್ಕಾರ 2026-27ನೇ ಶೈಕ್ಷಣಿಕ ವರ್ಷದಿಂದ 15 ಜಿಲ್ಲೆಗಳ ಸರ್ಕಾರಿ ಶಾಲೆಗಳಲ್ಲಿ ಐದನೇ ತರಗತಿ ವರೆಗೆ ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮಗಳಲ್ಲಿ ದ್ವಿಭಾಷಾ ಬೋಧನೆ ಜಾರಿಗೊಳಿಸಿದೆ. ಅದರಿಂದ ಕನ್ನಡ ಮಾಧ್ಯಮದಲ್ಲಿ ಬೋಧಿಸುತ್ತಿರುವ ಶಿಕ್ಷಕರಿಗೆ ಇಂಗ್ಲಿಷ್‌ನಲ್ಲಿ ಬೋಧಿಸಲು ತರಬೇತಿ ನೀಡಲಾಗುತ್ತಿದೆ. ಇಂಗ್ಲಿಷ್‌ಗೆ ಹೆಚ್ಚಿನ ಆದ್ಯತೆ ನೀಡಿರುವುದು ಹಾಗೂ ಕನ್ನಡದಲ್ಲಿ ಉತ್ತರಿಸುವ ವಿದ್ಯಾರ್ಥಿಗಳಿಗೆ ಕಡಿಮೆ ಶ್ರೇಯಾಂಕ ನೀಡುವ ಸೂಚನೆಗಳಿರುವುದು ಕನ್ನಡ ಭಾಷೆಯ ಮೇಲಿನ ನಕಾರಾತ್ಮಕ ಪರಿಣಾಮಕ್ಕೆ ಕಾರಣವಾಗಬಹುದಾಗಿದೆ. ಭಾಷಾವಾರು ರಾಜ್ಯ ರಚನೆಯ ಆಶಯ, ಕರ್ನಾಟಕದ ಭಾಷೆ ಸಂಸ್ಕೃತಿಯ ಬೆಳವಣಿಗೆ ಇಂಗ್ಲಿಷ್‌ಗೆ ಹೆಚ್ಚಿನ ಆದ್ಯತೆ ನೀಡಿರುವುದು ಹಾಗೂ ಕನ್ನಡದಲ್ಲಿ ಉತ್ತರಿಸುವ ವಿದ್ಯಾರ್ಥಿಗಳಿಗೆ ಕಡಿಮೆ ಶ್ರೇಯಾಂಕ ನೀಡುವ ಸೂಚನೆಗಳಿರುವುದು ಕನ್ನಡ ಭಾಷೆಯ ಮೇಲಿನ ನಕಾರಾತ್ಮಕ ಪರಿಣಾಮಕ್ಕೆ ಕಾರಣವಾಗಬಹುದಾಗಿದೆ.

ಮಾತೃಭಾಷೆಯ ಮೂಲಕ ಮಕ್ಕಳ ಆಲೋಚನಾ ಸಾಮರ್ಥ್ಯ ಮತ್ತು ಕಲಿಕೆಯ ಬೆಳವಣಿಗೆಗೆ ಹೆಚ್ಚಿನ ಅವಕಾಶ ದೊರೆಯುತ್ತದೆ ಎಂಬ ಅಂಶವನ್ನೂ ಮನವಿಯಲ್ಲಿ ಪ್ರಸ್ತಾಪಿಸಲಾಗಿದೆ. ಶಿಕ್ಷಣ ಮಾಧ್ಯಮಕ್ಕೆ ಸಂಬಂಧಿಸಿದ ರಾಜ್ಯ ಸರ್ಕಾರದ ನಿರ್ಧಾರವನ್ನು ತಕ್ಷಣ ಪರಿಶೀಲಿಸಿ ಕನ್ನಡ ಭಾಷೆ, ಕರ್ನಾಟಕದ ಅಸ್ತಿತ್ವ ಮತ್ತು ಸಾಂಸ್ಕೃತಿಕ ಘನತೆ ಸಂರಕ್ಷಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.

ಅಖಿಲ ಭಾರತೀಯ ಸಾಹಿತ್ಯ ಪರಿಷದ್ ವಿಭಾಗೀಯ ಸಹ ಸಂಯೋಜಕ ಕಟ್ಟೇಮನೆ ನಾಗೇಂದ್ರ, ಕಾರ್ಯದರ್ಶಿ ಎನ್.ಆರ್.ಪ್ರಶಾಂತ್ ಇತರರಿದ್ದರು.

# ಸಕಲೇಶಪುರದಲ್ಲಿ 18,066 ಮತದಾರರು ಔಟ್

## ಆಕ್ಷೇಪಣೆ ಸಲ್ಲಿಸಲು ಸೆ.23ರವರೆಗೆ ಅವಕಾಶ | 10 ಹೊಸ ಮತಗಟ್ಟೆಗಳ ಸೇರ್ಪಡೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ವೇಳೆ ಯಾವುದೇ ಅರ್ಹ ಮತದಾರರ ಹೆಸರನ್ನು ಅನ್ಯಾಯವಾಗಿ ಕೈಬಿಡದಂತೆ ಪ್ರತಿಯೊಂದು ಪ್ರಕರಣವನ್ನೂ ಕೂಲಂಕಷವಾಗಿ ಪರಿಶೀಲಿಸಿ, ಗುಣಮಟ್ಟದ ವಿಚಾರಣೆ ನಡೆಸಲಾಗುವುದು ಎಂದು ಮತದಾರರ ನೋಂದಣಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಹುಲ್ಲುಮನಿ ತಿಮ್ಮಣ್ಣ ಹೇಳಿದರು.

ಸೋಮವಾರ ನಡೆದ ಸಭೆಯಲ್ಲಿ ಮಾತನಾಡಿ, ಸಕಲೇಶಪುರ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 2,05,262 ಮತದಾರರಿದ್ದು, ಈ ಪೈಕಿ 1,87,196 ಮತದಾರರನ್ನು ಕರಡು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಳಿಸಲಾಗಿದೆ. ಇದು ಶೇ.91.20ರಷ್ಟಿದ್ದು, ಒಟ್ಟು 18,066 ಮತದಾರರ ಹೆಸರುಗಳನ್ನು ವಿವಿಧ ಕಾರಣಗಳಿಂದ ಕೈಬಿಡಲಾಗಿದೆ ಎಂದು ತಿಳಿಸಿದರು.

ವಿಶೇಷ ಪರಿಷ್ಕರಣೆ ವೇಳೆ ಮರಣ, ಶಾಶ್ವತ ಸ್ಥಳಾಂತರ, ಗೈರುಹಾಜರಿ,



ಮ್ಯಾಪಿಂಗ್ ಆಗದಿರುವುದು, ಮಾಹಿತಿ ಹೊಂದಾಣಿಕೆಯಾಗದಿರುವುದು ಸೇರಿದಂತೆ ವಿವಿಧ ಪ್ರಕರಣಗಳನ್ನು ಗುರುತಿಸಲಾಗಿದೆ. ಕ್ಷೇತ್ರದಲ್ಲಿ 3,634 ಮ್ಯಾಪಿಂಗ್ ಆಗದ ಪ್ರಕರಣಗಳು ಹಾಗೂ 3,075 ಪಟ್ಟಿಯಲ್ಲಿನ ದೋಷಕ್ಕೆ ಸಂಬಂಧಿಸಿದ ಪ್ರಕರಣಗಳು ಸೇರಿದಂತೆ ಸುಮಾರು 6,700 ಪ್ರಕರಣಗಳನ್ನು ಗುರುತಿಸಲಾಗಿದೆ.

ಸಂಬಂಧಪಟ್ಟ ಮತದಾರರಿಗೆ ನೋಟಿಸ್ ನೀಡಿ ಏಳು ದಿನಗಳ ಕಾಲಾವಕಾಶ ನೀಡಲಾಗುವುದು. ಒಟ್ಟು 11 ಎಇಆರ್‌ಒಗಳ ನೇತೃತ್ವದಲ್ಲಿ ಗ್ರಾಮ ಪಂಚಾಯಿತಿ ಹಾಗೂ ವಾರ್ಡ್‌ವಾರು ವಿಚಾರಣೆ ನಡೆಸಿ, ಮತದಾರರು ಸಲ್ಲಿಸುವ ದಾಖಲೆಗಳನ್ನು ಪರಿಶೀಲಿಸಿದ ಬಳಿಕ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

### ಮತಗಟ್ಟೆ ಸಂಖ್ಯೆ 295ಕ್ಕೆ ಏರಿಕೆ

ಸಕಲೇಶಪುರ ವಿಧಾನಸಭಾ ಕ್ಷೇತ್ರದಲ್ಲಿ ಈ ಹಿಂದೆ 285 ಮತಗಟ್ಟೆಗಳಿದ್ದವು. ಮತದಾರರ ಸಂಖ್ಯೆ ಹೆಚ್ಚಿರುವ ಪ್ರದೇಶಗಳಲ್ಲಿ ಹೊಸ ಮತಗಟ್ಟೆಗಳನ್ನು ಸ್ಥಾಪಿಸುವ ಕುರಿತು ರಾಜಕೀಯ ಪಕ್ಷಗಳ ಸಲಹೆ ಪಡೆದು ಪ್ರಸ್ತಾವನೆ ಸಲ್ಲಿಸಲಾಗಿತ್ತು. ಅದರಂತೆ 10 ಹೊಸ ಮತಗಟ್ಟೆಗಳನ್ನು ಸೇರ್ಪಡೆಗೊಳಿಸಲಾಗಿದ್ದು, ಕ್ಷೇತ್ರದಲ್ಲಿನ ಒಟ್ಟು ಮತಗಟ್ಟೆಗಳ ಸಂಖ್ಯೆ 295ಕ್ಕೆ ಏರಿಕೆಯಾಗಿದೆ ಎಂದು ತಿಳಿಸಿದರು.

ವಿಶೇಷ ಪರಿಷ್ಕರಣೆ ವೇಳೆ 5,336 ಮರಣ ಪ್ರಕರಣಗಳು, 9,774 ಶಾಶ್ವತ ಸ್ಥಳಾಂತರ ಪ್ರಕರಣಗಳು ಹಾಗೂ ಗೈರುಹಾಜರಿ ಸೇರಿದಂತೆ ವಿವಿಧ ವರ್ಗಗಳ ಪ್ರಕರಣಗಳನ್ನು ಗುರುತಿಸಲಾಗಿದೆ. ಇವುಗಳಿಗೆ ಸಂಬಂಧಿಸಿದಂತೆ ಮತದಾರರು ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದರು.

### ಸೆ.23ರ ವರೆಗೆ ಆಕ್ಷೇಪಣೆಗೆ ಅವಕಾಶ

ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದ ಅರ್ಹ ಮತದಾರರು ನಮೂನೆ6 ಮೂಲಕ ಹೆಸರು ಸೇರ್ಪಡೆಗೆ ಅರ್ಜಿ ಸಲ್ಲಿಸಬಹುದು. ಹೆಸರು ಸೇರ್ಪಡೆ, ತೆಗೆದುಹಾಕುವಿಕೆ ಅಥವಾ ತಿದ್ದುಪಡಿಗೆ ಸಂಬಂಧಿಸಿದಂತೆ ನಮೂನೆ7 ಹಾಗೂ ನಮೂನೆ8 ಮೂಲಕ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಆ.24ರಿಂದ ಸೆ.23ರ ವರೆಗೆ ಅವಕಾಶ ನೀಡಲಾಗಿದೆ.

